ದೂರವಾಣಿ ಸಂಖ್ಯೆ: 080–22212343
ಫ್ಯಾಕ್ಸ್ ಸಂಖ್ಯೆ: 080–22278803

ಅಂತರ್ಜಾಲ: https://kptcl.karnataka.gov.in
ಮಿಂಚಂಚೆ:director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

**ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್) : ಯು40109ಕೆಎ1999ಎಸ್ ಜಿ025521**

**(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560009)**

**ಸಂಖ್ಯೆ: ಕವಿಪ್ರನಿನಿ/ಬಿ103/13779/2021-22** **ದಿನಾಂಕ :** 12 DEC 2022

ಪ್ರಧಾನ ವ್ಯವಸ್ಥಾಪಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)
ಬೆಸ್ಕಾಂ-ಬೆಂಗಳೂರು, ಸೆಸ್ಕ್-ಮೈಸೂರು,
ಜೆಸ್ಕಾಂ-ಕಲಬುರಗಿ, ಹೆಸ್ಕಾಂ-ಹುಬ್ಬಳ್ಳಿ,
ಮೆಸ್ಕಾಂ-ಮಂಗಳೂರು.

75 ಸ್ವಾತಂತ್ರ್ಯದ ಅಮೃತಮಹೋತ್ಸವ

ಮಾನ್ಯರೆ,

ವಿಷಯ : ಅನುಕಂಪ ಆಧಾರದ ನೇಮಕಾತಿ ನೀಡುವ ಮುನ್ನ ದಾಖಲೆಗಳನ್ನು ಪರಿಶೀಲಿಸಿ, ನೈಜತೆಯನ್ನು ಪಡೆಯುವ ಬಗ್ಗೆ.

ಉಲ್ಲೇಖ :
1. ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 76 ಸೇನೆನಿ 2018, ದಿನಾಂಕ: 15.02.2018.
2. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 10 ಸೇನೆನಿ 2019 ದಿನಾಂಕ: 17.07.2019
3. ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/5411/96-97, ದಿನಾಂಕ: 03.02.2020
4. ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವೃತ್ತ(ದಕ್ಷಿಣ), ಬೆಸ್ಕಾಂ, ಬೆಂಗಳೂರು ರವರ ದಿನಾಂಕ: 11.10.2022 ರ ಪತ್ರ ಸಂಖ್ಯೆ: 10947.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಅನುಕಂಪ ಆಧಾರದ ನೇಮಕಾತಿ ಮೇಲೆ ನೇಮಕಾತಿ ನೀಡುವಾಗ ನೇರ ನೇಮಕಾತಿ ಪ್ರಕ್ರಿಯೆಯಲ್ಲಿ ಅನುಸರಿಸಲಾಗುತ್ತಿರುವ ರೀತಿಯಲ್ಲಿಯೇ ದಾಖಲೆಗಳ ನೈಜತೆ ದೃಢೀಕರಣಗೊಂಡ ನಂತರ ನೇಮಕಾತಿ ಆದೇಶ ಜಾರಿಗೊಳಿಸಬೇಕೆ ಎಂಬುದರ ಬಗ್ಗೆ ಸೂಕ್ತ ನಿರ್ದೇಶನ ನೀಡುವಂತೆ ಉಲ್ಲೇಖ-4 ರ ಪತ್ರದಲ್ಲಿ ಕೋರಲಾಗಿರುತ್ತದೆ.

ಸದರಿ ವಿಷಯವನ್ನು ಪರಿಶೀಲಿಸಲಾಯಿತು. ಅನುಕಂಪ ಆಧಾರದ ನೇಮಕಾತಿ ನೀಡುವಾಗ ನಿಗಮದಿಂದ ದಿನಾಂಕ: 03.02.2020 ರಂದು ಹೊರಡಿಸಿರುವ ಆದೇಶದನ್ವಯ ಅಗತ್ಯ ಕ್ರಮವಹಿಸುವಂತೆ ಈ ಮೂಲಕ ತಿಳಿಸಲಾಗಿದೆ (ಪ್ರತಿ ಲಗತ್ತಿಸಿದೆ). ಅದಾಗ್ಯೂ, ಅನುಕಂಪ ಆಧಾರದ ನೇಮಕಾತಿಗಾಗಿ ಸಲ್ಲಿಸುವ ಪ್ರಸ್ತಾವನೆಯನ್ನು ಮೂರು ತಿಂಗಳೊಳಗೆ ಪೂರ್ಣಗೊಳಿಸಿ ನೇಮಕಾತಿ ಆದೇಶ ನೀಡುವ ವಿಷಯದಲ್ಲಿ ಅಗತ್ಯ ಕ್ರಮ ಕೈಗೊಳ್ಳುವಂತೆ ಹಾಗೂ ಯಾವುದೇ ಕಾಲ ವಿಳಂಬಕ್ಕೆ ಅವಕಾಶ ನೀಡದಂತೆ ಸೂಚಿಸಲಾಗಿದೆ.

ತಮ್ಮ ವಿಶ್ವಾಸಿ,

ನಿರ್ದೇಶಕರು
**(ಆಡಳಿತ ಮತ್ತು ಮಾನವ ಸಂಪನ್ಮೂಲ)**

<u>ಪ್ರತಿಯನ್ನು ಮಾಹಿತಿಗಾಗಿ :-</u>
ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
ಎಲ್ಲಾ ಉಪ ಲೆಕ್ಕನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.

ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: www.kptcl.com
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521
ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.

**ವಿಷಯ:** ನಿಗಮದ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಆಯ್ಕೆಗೊಳ್ಳುವ ಅಭ್ಯರ್ಥಿಗಳನ್ನು ನೇಮಿಸಲು ನೇಮಕಾತಿ ಪ್ರಾಧಿಕಾರವು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ.

*****

**ಓದಲಾಗಿದೆ:**

1. ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 76 ಸೇನೆನಿ 2018 ದಿನಾಂಕ: 15.02.2018.
2. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 10 ಸೇನೆನಿ 2019 ದಿನಾಂಕ: 17.07.2019.

**ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/5411/96-97, ಬೆಂಗಳೂರು, ದಿನಾಂಕ:** 3 FEB 2020

ನೇರ ನೇಮಕಾತಿ ಮೂಲಕ ಆಯ್ಕೆಗೊಳ್ಳುವ ಅಭ್ಯರ್ಥಿಗಳನ್ನು ನೇಮಿಸಲು ನೇಮಕಾತಿ ಪ್ರಾಧಿಕಾರವು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಹೊರಡಿಸಿರುವ ಸರ್ಕಾರದ ದಿನಾಂಕ: 15.02.2018 ರ ಸುತ್ತೋಲೆ ಸಂಖ್ಯೆ: ಸಿಆಸುಇ 76 ಸೇನೆನಿ 2018 ನ್ನು ಹಾಗೂ ನಕಲಿ ಅಂಕಪಟ್ಟಿಗಳ ಆಧಾರದ ಮೇಲೆ ಸರ್ಕಾರಿ ಉದ್ಯೋಗ ಪಡೆಯುವುದನ್ನು ತಡೆಯಲು ಅವುಗಳ ನೈಜತೆಯನ್ನು ಖಚಿತ ಪಡಿಸಿಕೊಳ್ಳುವ ಬಗ್ಗೆ ಸರ್ಕಾರವು ಹೊರಡಿಸಿರುವ ದಿನಾಂಕ: 17.07.2019 ರ ಆದೇಶ ಸಂಖ್ಯೆ: ಸಿಆಸುಇ 10 ಸೇನೆನಿ 2019 ನ್ನು ನಿಗಮದಲ್ಲಿ ಅಳವಡಿಸಿಕೊಳ್ಳಲಾಗಿದೆ.

ಮೇಲ್ಕಂಡ ಸರ್ಕಾರದ ಆದೇಶಗಳನ್ನು ಈ ಆದೇಶಕ್ಕೆ ಅನುಬಂಧ (1) ಮತ್ತು ಅನುಬಂಧ (2) ಎಂದು ಲಗತ್ತಿಸಲಾಗಿದೆ.

**'ಮಾನ್ಯ ವ್ಯವಸ್ಥಾಪಕ ನಿರ್ದೇಶಕರು ಕವಿಪ್ರನಿನಿ ಇವರಿಂದ ಅನುಮೋದಿಸಲ್ಪಟ್ಟಿರುತ್ತದೆ'**

13/1/2020
ನಿರ್ದೇಶಕರು
**(ಆಡಳಿತ ಮತ್ತು ಮಾನವ ಸಂಪನ್ಮೂಲ)**

**ಗೆ:**

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಹಣಕಾಸು)/ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

www.kptcl.com/eprasarana for information of:

6. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ (ವಿ)/ಉಪ ಲೆಕ್ಕನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ**: ನಕಲಿ ಅಂಕಪಟ್ಟಿಗಳ ಆಧಾರದ ಮೇಲೆ ಸರ್ಕಾರಿ ಉದ್ಯೋಗ ಪಡೆಯುವುದನ್ನು ತಡೆಯಲು ಅವುಗಳ ನೈಜತೆಯನ್ನು ಖಚಿತ ಪಡಿಸಿಕೊಳ್ಳುವ ಬಗ್ಗೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 10 ಸೆನೆನಿ 2019, ಬೆಂಗಳೂರು,ದಿನಾಂಕ:17.07.2019**

**ಪ್ರಸ್ತಾವನೆ:**

ಪ್ರಸ್ತುತ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಮಾಡುವ ನೇಮಕಾತಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಸಿಂಧುತ್ವ ಪ್ರಮಾಣ ಪತ್ರ ಹಾಗೂ ಇನ್ನಿತರೆ ದಾಖಲಾತಿಗಳನ್ನು ಮಾತ್ರ ಸಕ್ಷಮ ಪ್ರಾಧಿಕಾರ ಪರಿಶೀಲನೆ ನಡೆಸುತ್ತಿದ್ದು, ಶೈಕ್ಷಣಿಕ ವಿದ್ಯಾರ್ಹತೆಗೆ ಸಂಬಂಧಿಸಿದ ಅಂಕಪಟ್ಟಿ/ ಪ್ರಮಾಣ ಪತ್ರಗಳನ್ನು ಅಭ್ಯರ್ಥಿಗಳು ಹಾಜರುಪಡಿಸುವ ಮೂಲ ದಾಖಲೆಗಳೊಂದಿಗೆ ತಾಳೆ ನೋಡುವ ವ್ಯವಸ್ಥೆ ಇರುತ್ತದೆ. ಆದರೆ, ಇವುಗಳ ನೈಜತೆಯನ್ನು ಅಂಕಪಟ್ಟಿ/ ಪ್ರಮಾಣ ಪತ್ರಗಳನ್ನು ವಿತರಿಸಿದ ವಿಶ್ವವಿದ್ಯಾಲಯಗಳು/ ಮಂಡಳಿಗಳು ಮುಂತಾದ ಶೈಕ್ಷಣಿಕ ಪರೀಕ್ಷಾ ಪ್ರಾಧಿಕಾರಗಳೊಂದಿಗೆ ಪರಿಶೀಲಿಸುವ ವ್ಯವಸ್ಥೆ ಇರುವುದಿಲ್ಲ. ಇತ್ತೀಚೆಗೆ ನಕಲಿ ಅಂಕಪಟ್ಟಿಗಳನ್ನು ಪಡೆದು ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ನೇಮಕಾತಿ ಹೊಂದುತ್ತಿರುವ ಹಲವು ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿವೆ.

2. ಆದುದರಿಂದ, ನಕಲಿ ಅಂಕಪಟ್ಟಿಗಳ ಆಧಾರದ ಮೇಲೆ ಅನರ್ಹ ಹಾಗೂ ಅನಪೇಕ್ಷಿತ ಅಭ್ಯರ್ಥಿಗಳು ಸರ್ಕಾರಿ ಉದ್ಯೋಗ ಪಡೆಯುವುದನ್ನು ತಡೆಗಟ್ಟಲು ಅನುವಾಗುವಂತೆ ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಮುನ್ನ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿಯೊಂದಿಗೆ ಸಲ್ಲಿಸುವ ಅಂಕಪಟ್ಟಿ / ಪ್ರಮಾಣ ಪತ್ರಗಳ ನೈಜತೆಯನ್ನು ಪರಿಶೀಲಿಸುವ ಪದ್ಧತಿಯನ್ನು ಜಾರಿಗೆ ತರಲು ಉದ್ದೇಶಿಸಿದೆ. ಆದುದರಿಂದ, ಈ ಆದೇಶ.

### ಆದೇಶ

3. ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಮಾಡುವ ನೇಮಕಾತಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಸಿಂಧುತ್ವ ಪ್ರಮಾಣ ಪತ್ರ ಹಾಗೂ ಇನ್ನಿತರೆ ದಾಖಲಾತಿಗಳ ಜೊತೆಗೆ **ಅಭ್ಯರ್ಥಿಗಳು ಸಲ್ಲಿಸುವ ಅಂಕಪಟ್ಟಿ/ ಶೈಕ್ಷಣಿಕ ಪ್ರಮಾಣ ಪತ್ರಗಳ ನೈಜತೆಯನ್ನು ಅವುಗಳನ್ನು ವಿತರಿಸಿದ ವಿಶ್ವವಿದ್ಯಾಲಯಗಳು/ ಶೈಕ್ಷಣಿಕ ಪರೀಕ್ಷಾ ಮಂಡಳಿಗಳೊಂದಿಗೆ ಪರಿಶೀಲನೆ** ನಡೆಸತಕ್ಕದ್ದು, ಪರಿಶೀಲನೆಯ ನಂತರ ಅಂತಹ ಪ್ರಮಾಣ ಪತ್ರಗಳು ಸಂಬಂಧಿಸಿದ ವಿಶ್ವವಿದ್ಯಾಲಯಗಳು/ ಶೈಕ್ಷಣಿಕ ಪರೀಕ್ಷಾ ಮಂಡಳಿಗಳಿಂದಲೇ ವಿತರಿಸಲಾದ ಪ್ರಮಾಣ ಪತ್ರಗಳೆಂದು ಖಾತ್ರಿಯಾದ ನಂತರವೇ ನೇಮಕಾತಿ ಆದೇಶ ಹೊರಡಿಸತಕ್ಕದೆಂದು ಎಲ್ಲಾ ಆಯ್ಕೆ ಹಾಗೂ ನೇಮಕಾತಿ ಪ್ರಾಧಿಕಾರಗಳಿಗೆ ಆದೇಶಿಸಲಾಗಿದೆ.

--2

4. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು/ಪ್ರಧಾನ ಕಾರ್ಯದರ್ಶಿಯವರು/ ಕಾರ್ಯದರ್ಶಿಯವರು ಅವರ ಆಡಳಿತ ವ್ಯಾಪ್ತಿಗೊಳಪಡುವ ಸ್ವಾಯತ್ತ ಸಂಸ್ಥೆಗಳು/ ವಿಶ್ವವಿದ್ಯಾಲಯಗಳು/ ಸಾರ್ವಜನಿಕ ಉದ್ದಿಮೆಗಳು/ ಆಯೋಗ/ ನಿಗಮ/ ಮಂಡಳಿಗಳು/ ಸ್ಥಳೀಯ ಸಂಸ್ಥೆಗಳು ಮತ್ತು ಸರ್ಕಾರದಿಂದ ಅನುದಾನ ಪಡೆಯುವ ಸಂಸ್ಥೆಗಳಿಗೆ ಈ ಆದೇಶವನ್ನು ಪಾಲಿಸಲು ಸೂಚನೆಗಳನ್ನು ನೀಡುವಂತೆ ತಿಳಿಸಲಾಗಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Gayathri. M.R
17.07.19
(ಗಾಯತ್ರಿ. ಎಂ.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

ಇವರಿಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ಇದನ್ನು ರಾಜ್ಯಪತ್ರದಲ್ಲಿ ಪ್ರಕಟಿಸಿ 250 ಪ್ರತಿಗಳನ್ನು ಸಿಆಸುಇ (ಸೇವಾ ನಿಯಮಗಳು-ಎ), ನಂ. 31, ವಿಧಾನ ಸೌಧ, ಬೆಂಗಳೂರು ಇವರಿಗೆ ಒದಗಿಸುವಂತೆ ಕೋರಿದೆ.

ಪ್ರತಿ:
1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
3. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು / ಪ್ರಧಾನ ಕಾರ್ಯದರ್ಶಿಯವರು / ಕಾರ್ಯದರ್ಶಿಯವರು.
5. ಪ್ರಧಾನ ಮಹಾಲೇಖಪಾಲರು (ಜಿ ಮತ್ತು ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು --560 001.
6. ಪ್ರಧಾನ ಮಹಾಲೇಖಪಾಲರು (ಇ ಮತ್ತು ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು --560 001.
7. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು – 560 001.
8. ಎಲ್ಲಾ ಇಲಾಖಾ ಮುಖ್ಯಸ್ಥರುಗಳು / ಜಿಲ್ಲಾಧಿಕಾರಿಗಳು/ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು / ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು.
9. ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು --560 003.
10. ನಿರ್ದೇಶಕರು, ಪದವಿ ಪೂವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು --560 012.
11. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ / ಪರಿಷತ್ತು, ವಿಧಾನ ಸೌಧ, ಬೆಂಗಳೂರು.
12. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
13. *ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
14. * ರಿಜಿಸ್ಟ್ರಾ , ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
15. *ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
16. ಶಾಖಾ ರಕ್ಷಾ ಕಡತ / ಬಿಡಿ ಪ್ರತಿಗಳು / ಇಲಾಖೆಯ ಅಂತರ್ಜಾಲ ತಾಣ.

(* ಪ್ರತ್ಯೇಕ ಪತ್ರದೊಂದಿಗೆ)

**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 76 ಸೇನೆನಿ 2018

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ, ಬೆಂಗಳೂರು
ದಿನಾಂಕ: 15/02/2018

**ಸುತ್ತೋಲೆ**

ವಿಷಯ : ರಾಜ್ಯ ನಾಗರಿಕ ಸೇವಾ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಆಯ್ಕೆಗೊಳ್ಳುವ ಅಭ್ಯರ್ಥಿಗಳನ್ನು ನೇಮಿಸಲು ನೇಮಕಾತಿ ಪ್ರಾಧಿಕಾರವು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ

ಉಲ್ಲೇಖ : (1) ಅಧಿಕೃತ ಜ್ಞಾಪನ ಸಂಖ್ಯೆ: ಡಿಪಿಎಆರ್ 23 ಎಸ್‌ಆರ್‌ಆರ್ 92, ದಿನಾಂಕ: 29/06/1992

(2) ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 149 ಸೇನೆನಿ 2010, ದಿನಾಂಕ: 18/10/2010

*****

1) ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 10ರನ್ವಯ ಅಭ್ಯರ್ಥಿಗಳ ನಡತೆ ಮತ್ತು ಪೂರ್ವ ಚರಿತ್ರೆ ಬಗ್ಗೆ ಹಾಗೂ ನಿಯಮ 12ರನ್ವಯ ಅಭ್ಯರ್ಥಿಗಳು ಕರ್ತವ್ಯ ನಿರ್ವಹಿಸಲು ದೈಹಿಕ ಸಾಮರ್ಥ್ಯ ಹೊಂದಿರುವ ಬಗ್ಗೆ ಖಚಿತಪಡಿಸಿಕೊಳ್ಳದೇ ನೇಮಕ ಮಾಡಲು ಅವಕಾಶವಿರುವುದಿಲ್ಲ.

2) ಉಲ್ಲೇಖ (1)ರ ದಿನಾಂಕ: 29/06/1992ರ ಅಧಿಕೃತ ಜ್ಞಾಪನದಲ್ಲಿ ಲೋಕಸೇವಾ ಆಯೋಗ ಅಥವಾ ನೇಮಕಾತಿ ಸಮಿತಿ ಮೂಲಕ ಆಯ್ಕೆ ಹೊಂದಿದ ಅಭ್ಯರ್ಥಿಗಳ ನಡತೆ ಮತ್ತು ಪೂರ್ವ ಚರಿತ್ರೆಯ ಪೋಲೀಸ್ ವರದಿ, ವೈದ್ಯಕೀಯ ಪರೀಕ್ಷಾ ವರದಿ ಸೇರಿದಂತೆ ಅಭ್ಯರ್ಥಿಗಳು ಮೀಸಲಾತಿ ಕೋರಿ ಸಲ್ಲಿಸುವ ದಾಖಲಾತಿಗಳ ನೈಜತೆಯನ್ನು ಸಕ್ಷಮ ಪ್ರಾಧಿಕಾರಗಳಿಂದ ಮೂರು ತಿಂಗಳೊಳಗಾಗಿ ಪಡೆದು ನೇಮಕಾತಿ ಆದೇಶ ಹೊರಡಿಸಲು ನೇಮಕಾತಿ ಪ್ರಾಧಿಕಾರಗಳಿಗೆ ಸೂಚನೆ ನೀಡಲಾಗಿದೆ.

3) ಉಲ್ಲೇಖ (2)ರ ದಿನಾಂಕ: 18/10/2010ರ ಅಧಿಕೃತ ಜ್ಞಾಪನದಲ್ಲಿ ರಾಜ್ಯ ನಾಗರಿಕ ಸೇವೆಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡುವಾಗ ಅಭ್ಯರ್ಥಿಗಳ ನಡತೆ ಮತ್ತು ಪೂರ್ವ ಚರಿತ್ರೆಯನ್ನು ಪರಿಶೀಲಿಸಿಕೊಂಡು ನೇಮಕಾತಿ ಆದೇಶ ಹೊರಡಿಸಲು ತಿಳಿಸಲಾಗಿದೆ.

ಮು.ತಿ.ನೋ..2

4) ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ ನೇಮಕಾತಿಗಳು ಮುಂತಾದವುಗಳ ನಿಯಮಗಳು, 1992ರ ನಿಯಮ 9ರನ್ವಯ ಸಿಂಧುತ್ವ ಪ್ರಮಾಣ ಪತ್ರ ಪಡೆಯದ ಯಾವುದೇ ವ್ಯಕ್ತಿಯನ್ನು ಸರ್ಕಾರದ ಸೇವೆಗಾಗಲೀ ಅಥವಾ ಹುದ್ದೆಗಾಗಲೀ ಇಲ್ಲವೇ ಸಾರ್ವಜನಿಕ ಕ್ಷೇತ್ರದ ಕಾರ್ಯ ಸಂಸ್ಥೆಗಾಗಲಿ ನೇಮಕ ಮಾಡಲು ಅವಕಾಶವಿಲ್ಲದ ಕಾರಣ ಸಿಂಧುತ್ವ ವರದಿ ಸ್ವೀಕೃತವಾಗದ ಅಭ್ಯರ್ಥಿಗೆ ನೇಮಕಾತಿ ಆದೇಶ ಹೊರಡಿಸತಕ್ಕದ್ದಲ್ಲ.

5) ನೇಮಕಾತಿ ಪ್ರಾಧಿಕಾರಗಳು ಆಯ್ಕೆಗೊಂಡ ಅಭ್ಯರ್ಥಿಗಳ ಪೋಲೀಸ್ ವರದಿ, ವೈದ್ಯಕೀಯ ಪರೀಕ್ಷಾ ವರದಿ ಹಾಗೂ ಮೀಸಲಾತಿ ಸಿಂಧುತ್ವದ ವರದಿಗಳನ್ನು ಸಕ್ಷಮ ಪ್ರಾಧಿಕಾರಗಳಿಂದ ನಿಗದಿತ ಕಾಲಾವಧಿಯೊಳಗೆ ಪಡೆಯಲು ಕ್ರಮವಹಿಸದೇ ನೇಮಕಾತಿ ಪ್ರಕ್ರಿಯೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ಹಿನ್ನೆಲೆಯಲ್ಲಿ ಆಯ್ಕೆಗೊಂಡ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಹೊರಡಿಸಲು ಕೆಳಕಂಡ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ಸೂಚಿಸಲಾಗಿದೆ:

(ಅ) ಅಂತಿಮ ಆಯ್ಕೆಪಟ್ಟಿ ಸ್ವೀಕೃತವಾದ ಒಂದು ವಾರದೊಳಗಾಗಿ ಅಭ್ಯರ್ಥಿಗಳ ನಡತೆ ಮತ್ತು ಪೂರ್ವ ಚರಿತ್ರೆಯ ಪೋಲೀಸ್ ವರದಿ, ವೈದ್ಯಕೀಯ ಪರೀಕ್ಷಾ ವರದಿ ಸೇರಿದಂತೆ ಮೀಸಲಾತಿಯಡಿ ಆಯ್ಕೆಗೊಂಡ ಅಭ್ಯರ್ಥಿಗಳ ಮೀಸಲಾತಿ ಸಿಂಧುತ್ವ ಪ್ರಮಾಣಪತ್ರ ಪಡೆಯಲು ಸಕ್ಷಮ ಪ್ರಾಧಿಕಾರಗಳಿಂದ ವರದಿ ಪಡೆಯಲು ಕ್ರಮವಹಿಸುವುದು.

(ಆ) ನಡತೆ ಮತ್ತು ಪೂರ್ವ ಚರಿತ್ರೆಯ ಪೋಲೀಸ್ ವರದಿ ಮತ್ತು ಮೀಸಲಾತಿಯಡಿ ಆಯ್ಕೆಗೊಂಡ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣಪತ್ರಗಳ ನೈಜತೆಯ ಸಿಂಧುತ್ವ ವರದಿಗಳನ್ನು ಒಂದು ತಿಂಗಳೊಳಗಾಗಿ ನೇಮಕಾತಿ ಪ್ರಾಧಿಕಾರಕ್ಕೆ ಕಳುಹಿಸಲು ಸಕ್ಷಮ ಪ್ರಾಧಿಕಾರಗಳು ಕ್ರಮವಹಿಸುವುದು.

(ಇ) ಅಭ್ಯರ್ಥಿಗಳ ನಡತೆ ಮತ್ತು ಪೂರ್ವ ಚರಿತ್ರೆಯ ಪೋಲೀಸ್ ವರದಿ ಹಾಗೂ ವೈದ್ಯಕೀಯ ಪರೀಕ್ಷಾ ವರದಿಗಳು ಹಾಗೂ ಸಮತಳ ಮೀಸಲಾತಿ ಪ್ರಮಾಣ ಪತ್ರಗಳು ಸ್ವೀಕೃತವಾಗಿ ಮೀಸಲಾತಿ ಪ್ರಮಾಣಪತ್ರದ ಸಿಂಧುತ್ವ ವರದಿ ಸ್ವೀಕೃತವಾಗಲು ವಿಳಂಬವಾದಲ್ಲಿ, **ಸಿಂಧುತ್ವ ಪ್ರಮಾಣ ಪತ್ರ ಅನ್ವಯಿಸದಿರುವ ಅಭ್ಯರ್ಥಿಗಳಿಗೆ ಮತ್ತು ಸಿಂಧುತ್ವದ ವರದಿ ಸ್ವೀಕೃತವಾದ** ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಹೊರಡಿಸುವುದು.

ಪು.ತಿ.ನೋ..3

(ಈ) ಸಿಂಧುತ್ವ ಪ್ರಮಾಣ ಪತ್ರ ವಿಳಂಬವಾಗಿ ಸ್ವೀಕೃತವಾದ ಅಭ್ಯರ್ಥಿಗಳಿಗೆ ತದನಂತರ ನೇಮಕಾತಿ ಆದೇಶವನ್ನು ನೀಡುವುದು. ಈ ರೀತಿ ತಡವಾಗಿ ನೇಮಕಾತಿ ಆದೇಶ ನೀಡಿದರೂ ಸಹ ಅಂತಹ ಅಭ್ಯರ್ಥಿಗಳ ಜೇಷ್ಠತೆಯನ್ನು ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು, 1957ರ ನಿಯಮ 5 ರನ್ವಯ ಅವರುಗಳು ಆಯ್ಕೆ ಪಟ್ಟಿಯಲ್ಲಿ ಯಾವ ಕ್ರಮಾಂಕದಲ್ಲಿರುತ್ತಾರೋ ಅದೇ ಕ್ರಮಾಂಕದಲ್ಲಿ ನಿಗದಿಪಡಿಸುವುದು.

(ಉ) ಕರ್ನಾಟಕ ಸರ್ಕಾರಿ ನೌಕರರ (ಜೇಷ್ಟತಾ) ನಿಯಮಗಳು, 1957ರ ನಿಯಮ 5(2)ರನ್ವಯ ಆಯ್ಕೆಪಟ್ಟಿಯಲ್ಲಿರುವಂತೆ ಜೇಷ್ಟತಾ ಕ್ರಮಾಂಕವನ್ನು ನಿಗದಿಪಡಿಸಲಾಗುವುದೆಂಬ ಅಂಶವನ್ನು ನೇಮಕಾತಿ ಆದೇಶದಲ್ಲಿ ನಮೂದಿಸುವುದು.

(ಊ) **ಕರ್ನಾಟಕ ಸಿವಿಲ್ ಸೇವಾ (ಸ್ಪರ್ಧಾತ್ಮಕ ಪರೀಕ್ಷೆ ಮತ್ತು ಆಯ್ಕೆ ಮೂಲಕ ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು, 2006ರನ್ವಯ ಆಯ್ಕೆ ಪಟ್ಟಿಯು ಜಾರಿಯಲ್ಲಿರುವ ಅವಧಿಯು ಒಂದು ವರ್ಷವಾಗಿರುತ್ತದೆ. ಆದುದರಿಂದ, ನೇಮಕಾತಿ ಆದೇಶವನ್ನು ಆಯ್ಕೆಪಟ್ಟಿ ಪ್ರಕಟಗೊಂಡ ಒಂದು ವರ್ಷದ ಒಳಗಾಗಿ ನೀಡಲು ಕ್ರಮಕೈಗೊಳ್ಳುವುದು.**

(ಪಿ.ರವಿಕುಮಾರ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

ಗೆ: ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ದಿನಾಂಕ: 15/02/2018ರ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಇದರ 100 ಪ್ರತಿಗಳನ್ನು ಒದಗಿಸಲು.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, (ಜಿ &ಎಸ್‌ಎಸ್‌ಎ), (ಇ &ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು
2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು
4. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು
5. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು
6. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
7. ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಯವರು
8. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯಮಾರ್ಗ, ಚಾಣಕ್ಯಪುರಿ, ನವದೆಹಲಿ-110021
9. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ / ಪರಿಷತ್ತು, ಬೆಂಗಳೂರು
10. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು
11. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು
12. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು

ಪು.ತಿ.ನೋ..4